ವಿಷಯ :– ಸರಕಾರಿ ಉರ್ದು ಪ್ರಾಥಮಿಕ ಶಾಲೆಗಳ ಸಂಖ್ಯೆ.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 239 (983)

ಶ್ರೀ ಕಮರುಲ್ ಇಸ್ಲಾಂ (ಗುಲ್ಬರ್ಗ) :– ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿರುವ ಸರ್ಕಾರಿ ಉರ್ದು ಪ್ರಾಥಮಿಕ ಶಾಲೆಗಳೆಷ್ಟು ?

ಆ) ಈ ಶಾಲೆಗಳಿಗೆ ಮಂಜೂರಾಗಿರುವ ಕನ್ನಡ ಶಿಕ್ಷಕರ ಹುದ್ದೆಗಳೆಷ್ಟು ?

ಇ) ಭರ್ತಿ ಮಾಡಿರುವ ಕನ್ನಡ ಶಿಕ್ಷಕರ ಹುದ್ದೆಗಳೆಷ್ಟು ?

ಈ) ಕನ್ನಡ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣವೇನು ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು) :–

ಅ) 2,781.

ಆ) 2,781.

ಇ) 2,781.

ಈ) ಉದ್ಭವಿಸುವುದಿಲ್ಲ.

ವಿಷಯ :– ಸರ್ಕಾರಿ ಮಾನ್ಯತೆ ಪಡೆದಿರುವ ಖಾಸಗಿ ಶಾಲೆಗಳಲ್ಲಿ ಕನ್ನಡ ಶಿಕ್ಷಕರುಗಳ ನೇಮಕಾತಿ.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 237 (1013)

ಶ್ರೀ ಸಿ.ಆರ್. ಸಗೀರ್ ಅಹಮದ್ (ಚಿಕ್ಕಮಂಗಳೂರು) : ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಪ್ರಾಥಮಿಕ ಅನುದಾನ ಸಂಹಿತೆ ನಿಯಮದಲ್ಲಿ ಸರ್ಕಾರದಿಂದ ಮಾನ್ಯತೆ ಪಡೆದ ಖಾಸಗಿ ಉರ್ದು ಪ್ರಾಥಮಿಕ ಶಾಲೆಗಳಲ್ಲಿ ಕನ್ನಡ ಶಿಕ್ಷಕರನ್ನು ನೇಮಿಸಲು ನಿಯಮ ಒದಗಿಸಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದರೆ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು) :–

ಅ) ಹೌದು.

ಪ್ರಾಥಮಿಕ ಶಾಲೆಗಳಲ್ಲಿ ಭಾಷಾ ಶಿಕ್ಷಕರ ಪ್ರತ್ಯೇಕ ನೇಮಕಾತಿಗೆ ಅವಕಾಶವಿಲ್ಲ.

ಆ) ಶಾಲೆಗೆ ಮಂಜೂರಾದ ಶಿಕ್ಷಕ ಹುದ್ದೆಯಲ್ಲಿ ಒಂದು ಹುದ್ದೆಯನ್ನು ಕನ್ನಡ ಭಾಷಾ ಜ್ಞಾನ ಬಲ್ಲವರಿಂದ ತುಂಬುವಂತೆ ಆದೇಶಿಸಲಾಗಿದೆ.

ಶ್ರೀ ಸಿ. ಆರ್. ಸಗೀರ್ ಅಹಮದ್ :– ಮಾನ್ಯ ಅಧ್ಯಕ್ಷರೆ, ಉರ್ದು ಪ್ರಾಥಮಿಕ ಶಾಲೆಗಳಲ್ಲಿ ಕನ್ನಡ ಶಿಕ್ಷಕರು ಇದ್ದಾರೆಯೇ ಎಂದು ಕೇಳಿದ್ದಕ್ಕೆ "ಇಲ್ಲವೆಂದು" ಹೇಳಿದ್ದಾರೆ. ಜೊತೆಗೆ ಕನ್ನಡ ಶಿಕ್ಷಕರನ್ನು ಉರ್ದು ಶಾಲೆಗಳಲ್ಲಿ ತುಂಬುವುದಕ್ಕೆ ಅವಕಾಶವಿಲ್ಲವೆಂದೂ ಇರುವಂತಹ ಸ್ಯಾಂಕ್ಷನ್ ಪೋಸ್ಟ್‌ಗಳಲ್ಲಿ ಕನ್ನಡ ಅಭ್ಯಾಸ ಪಡೆಯಬೇಕೆಂದು ಹೇಳಿದ್ದಾರೆ. ನಮ್ಮ ರಾಜ್ಯದಲ್ಲಿ ಕನ್ನಡವನ್ನು ಕಲಿಯಬೇಕಾಗಿದೆ. ಮತ್ತು ನಮ್ಮ ರಾಜ್ಯದಲ್ಲಿ ಮಾತೃಭಾಷೆ ಕನ್ನಡ ಆಗಿರುವುದರಿಂದ ಉರ್ದುಶಾಲೆಗಳಲ್ಲಿ ಕನ್ನಡ ಅಧ್ಯಾಪಕರನ್ನು ನೇಮಿಸಬೇಕೆಂದು ತಮ್ಮ ಮೂಲಕ ಸರ್ಕಾರವನ್ನು ಒತ್ತಾಯಿಸುತ್ತೇನೆ. ಹಾಗೂ ದಯಮಾಡಿ ಕನ್ನಡ ಶಿಕ್ಷಕರನ್ನು ನೇಮಿಸುವಂತಹ ತೀರ್ಮಾನವನ್ನು ಸರ್ಕಾರ ತೆಗೆದುಕೊಳ್ಳಬೇಕೆಂದು ಮತ್ತೊಮ್ಮೆ ತಮ್ಮ ಮೂಲಕ ಕೇಳಿಕೊಳ್ಳುತ್ತೇನೆ.

ಶ್ರೀ ಎಂ. ವೀರಪ್ಪ ಮೊಯಿಲಿ :– ಮಾನ್ಯ ಅಧ್ಯಕ್ಷರೆ, ಸರ್ಕಾರಿ ಉರ್ದು ಮಾಧ್ಯಮ ಶಾಲೆಗಳಲ್ಲಿ ನಾವು ಕನ್ನಡ ಅಧ್ಯಾಪಕರನ್ನು ಕೂಡ ನೇಮಕ ಮಾಡಿದ್ದೇವೆ. ಈಗ ಪ್ರಶ್ನೆ ಏನೆಂದರೆ ಅನುದಾನ ಸಂಹಿತೆಗೊಳಪಟ್ಟಿರತಕ್ಕ ಶಾಲೆಗಳಲ್ಲೂ ಕೂಡ ಅಂತಹ ಉರ್ದು ಶಾಲೆಗಳಲ್ಲಿ ಕನ್ನಡ ಅಧ್ಯಾಪಕರನ್ನು ನೇಮಕ ಮಾಡಬೇಕೆಂದು ಇದೆ.